# ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ

## ಕರ್ನಾಟಕ ಸರ್ಕಾರ

ಸಂಖ್ಯೆ : ಕ.ಕೆಸಂ.ಅ.ಪ್ರಾ/ಬೆಂ/LDM/124/ರಿ.ಅ.ಸಂ:38401/2014/2020-21/572 ದಿನಾಂಕ : 05.08.2022 06

**ಅಧಿಸೂಚನೆ**

ವಿಷಯ : ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 2014 ರಂತೆ ಸಣ್ಣ ನೀರಾವರಿ ಸುಪರ್ಧಿನಲ್ಲಿರುವ ಕೆರೆಗಳಿಗೆ "ಹೆಸರಿಸಲಾದ ಅಧಿಕಾರಿಗಳನ್ನು" (Designated Officers) ನೇಮಿಸುವ ಬಗ್ಗೆ

ಉಲ್ಲೇಖ 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 19 ಶಾಸನ 2014 ಬೆಂಗಳೂರು ದಿನಾಂಕ: 06.09.2014

2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸನೀಇ 129 ಮಸಾವಿ 2016 ದಿನಾಂಕ : 29.08.2017

* * *

**ಪ್ರಸ್ತಾವನೆ:**

ಉಲ್ಲೇಖ (1) ರಲ್ಲಿ ಹೇಳಿರುವ ಸರ್ಕಾರದ ಅಧಿಸೂಚನೆಯಂತೆ, ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 2014ನ್ನು ಜಾರಿಗೆ ತರಲಾಗಿದ್ದು, ಸದರಿ ಅಧಿನಿಯಮದ ಪ್ರಕರಣ 10 ರಂತೆ ಪ್ರಾಧಿಕಾರವು ಕೆರೆಗಳ, ಕೊಳಗಳ, ಸರೋವರಗಳ, ರಕ್ಷಣೆ, ಸಂರಕ್ಷಣೆ ಮತ್ತು ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳುವುದಕ್ಕಾಗಿ ಹಾಗೂ ಯಾವುದೇ ಇತರ ಉದ್ದೇಶಕ್ಕಾಗಿ ಒಂದು ಅಥವಾ ಹೆಚ್ಚು ಕೆರೆಗಳ, ಕೊಳಗಳ, ಸರೋವರಗಳ ಉಸ್ತುವಾರಿಯನ್ನು ವಹಿಸಿಕೊಳ್ಳುವುದಕ್ಕಾಗಿ, ಯಾವೊಬ್ಬ ಅಧಿಕಾರಿಯನ್ನು ಜಿಲ್ಲಾವಾರು ಹೆಸರಿಸಲಾದ ಅಧಿಕಾರಿಯೆಂದು ಹೆಸರಿಸಬಹುದಾಗಿದೆ ಅಥವಾ ನೇಮಕಮಾಡಬಹುದಾಗಿರುತ್ತದೆ.

ಉಲ್ಲೇಖ (2) ರಲ್ಲಿನ ಸರ್ಕಾರದ ಅಧಿಸೂಚನೆ ಸಂಖ್ಯೆ: ಸನೀಇ 129 ಮಸಾವಿ 2016 ದಿನಾಂಕ : 29.08.2017 ರಲ್ಲಿ ರಾಜ್ಯದ ಸಣ್ಣ ನೀರಾವರಿ ಕೆರೆಗಳಿಗೆ, ಎಲ್ಲಾ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರನ್ನು "ಹೆಸರಿಸಲಾದ ಅಧಿಕಾರಿ" ಗಳೆಂದು (Designated Officer) ನೇಮಿಸಿ ಆದೇಶಿಸಿಸಲಾಗಿರುತ್ತದೆ.

**ಆದೇಶ**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಹಾಗೂ ಉಲ್ಲೇಖ (2) ರಲ್ಲಿನ ಸರ್ಕಾರದ ಅಧಿಸೂಚನೆ ಸಂಖ್ಯೆ: ಸನೀಇ 129 ಮಸಾವಿ 2016 ದಿನಾಂಕ : 29.08.2017 ರಲ್ಲಿ ರಾಜ್ಯದ ಸಣ್ಣ ನೀರಾವರಿ ಕೆರೆಗಳಿಗೆ, ರಾಜ್ಯದ ಎಲ್ಲಾ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಸಂಬಧಿತ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರನ್ನು "ಹೆಸರಿಸಲಾದ ಅಧಿಕಾರಿ" ಗಳೆಂದು (Designated Officer) ನೇಮಿಸಿರುವುದನ್ನು ಆಧರಿಸಿ, ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 2014 ರ ಪ್ರಕರಣ 10 ರನ್ವಯ, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಸುಪರ್ಧಿಯಲ್ಲಿರುವ ಎಲ್ಲಾ ಕೆರೆಗಳಿಗೆ ಪ್ರಾಧಿಕಾರದಿಂದಲೂ ಎಲ್ಲಾ ಜಿಲ್ಲೆಗಳಲ್ಲಿನ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರನ್ನು "ಹೆಸರಿಸಲಾದ ಅಧಿಕಾರಿ" ಗಳೆಂದು (Designated Officers) ನೇಮಿಸಿ ಈ ಅಧಿಸೂಚನೆ ಹೊರಡಿಸಿದೆ.

.......2

ನೆಲ ಮಹಡಿ, ಬೀಜ ಭವನ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು-560024.
ದೂರವಾಣಿ: 080-23513711/12, ಈಮೇಲ್-ktcda2018@gmail.com

Scanned with CamScanner

ಹೀಗೆ ನೇಮಿಸಿ, "ಹೆಸರಿಸಲಾದ ಅಧಿಕಾರಿಗಳು" (Designated Officers), ತಮ್ಮ ವ್ಯಾಪ್ತಿಗೆ ಒಳಪಡುವ ಎಲ್ಲಾ ಸಣ್ಣ ನೀರಾವರಿ ಕೆರೆಗಳನ್ನು ಮೇಲೆ ತಿಳಿಸಿರುವಂತೆ ಸಂರಕ್ಷಿಸಲು ಹಾಗೂ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 2014 ರಲ್ಲಿ ಸೂಚಿಸಿರುವ ಹಾಗೂ ಸರ್ಕಾರವು ಕಾಲಕಾಲಕ್ಕೆ ನಿರ್ದಿಷ್ಟಪಡಿಸಬಹುದಾದ ಅಂತಹ ಇತರ ಪ್ರಕಾರ್ಯಗಳು ಮತ್ತು ಅಧಿಕಾರಗಳನ್ನು ಚಲಾಯಿಸಲು ಹಕ್ಕುಳ್ಳವರಾಗಿರುತ್ತಾರೆ.

ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಪ್ರತಿಯನ್ನು :

1. ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ ಅಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವರ ಅಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಗೆ ಇಲಾಖೆ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು
13. ಸರ್ಕಾರದ ಕಾರ್ಯದರ್ಶಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು
14. ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಬೆಂಗಳೂರು
15. ಮುಖ್ಯ ಅಭಿಯಂತರರು, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ (ದಕ್ಷಿಣ), ಬೆಂಗಳೂರು.
16. ಮುಖ್ಯ ಅಭಿಯಂತರರು, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ (ಉತ್ತರ), ವಿಜಯಪುರ
17. ಮುಖ್ಯ ಅಭಿಯಂತರರು (ಕೆರೆಗಳು), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
18. ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಎಲ್ಲಾ ಕಾರ್ಯಪಾಲಕ ಅಭಿಯಂತರರು.
19. ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು
20. ಎಲ್ಲಾ ಜಿಲ್ಲಾಧಿಕಾರಿಗಳು
21. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್

Scanned with CamScanner